# All India Radio: Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.04.2026 1.10 p.m.**

**<><><><>**

ಮುಖ್ಯಾಂಶಗಳು

1. ಪಶ್ಚಿಮ ಬಂಗಾಳದ ಎರಡನೇ ಹಂತದ ವಿಧಾನಸಭಾ ಚುನಾವಣೆ; ಅಭ್ಯರ್ಥಿಗಳ ಪರ ರಾಜಕೀಯ ನಾಯಕರ ಬಿರುಸಿನ ಪ್ರಚಾರ
2. ಪ್ರಸಕ್ತ ವರ್ಷ ೭೫ ಲಕ್ಷಕ್ಕೂ ಹೆಚ್ಚು ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಶಿಕ್ಷಣ ಮತ್ತು ಸಬಲೀಕರಣಕ್ಕಾಗಿ ಏಳು ಸಾವಿರದ ೯೮೧ ಕೋಟಿ ರೂಪಾಯಿ ವಿತರಿಸಿದ ಕೇಂದ್ರ ಸರ್ಕಾರ
3. ಅಮೃತ್ ಕಾಲ್ ಮತ್ತು ವಿಕಸಿತ ಭಾರತದ ದೃಷ್ಟಿಕೋನಕ್ಕೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದಿಂದ ಚಂಡೀಗಢದಲ್ಲಿ ಮೂರು ದಿನಗಳ ಚಿಂತನ್ ಶಿಬಿರ
4. ಐಪಿಎಲ್ ಟಿ-೨೦ ಕ್ರಿಕೆಟ್; ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಗುಜರಾತ್ ಟೈಟಾನ್ಸ್ ತಂಡ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ವಿಧಾನಸಭಾ ಚುನಾವಣೆಗಾಗಿ ಪ್ರಚಾರ ನಡೆಸುತ್ತಿದ್ದಾರೆ. ಅವರು ಇಂದು ಡಮ್‌ಡಮ್‌ನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ, ನಂತರ ಬರುಯಿಪುರದಲ್ಲಿ ಮತ್ತೊಂದು ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ. ಕೇಂದ್ರ ಗೃಹ ಸಚಿವ ಮತ್ತು ಹಿರಿಯ ಬಿಜೆಪಿ ನಾಯಕ ಅಮಿತ್ ಶಾ ಕೂಡ ಪ್ರಚಾರದಲ್ಲಿ ಭಾಗವಹಿಸುತ್ತಿದ್ದಾರೆ. ಇಂದು ಮಧ್ಯಾಹ್ನ, ಅವರು ಹಿಂಗಲ್‌ಗಂಜ್ ಮತ್ತು ಕೊನ್ನಾಗರ್‌ನ ಲೆಬುಖಾಲಿ ಮೈದಾನದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಸಂಜೆ, ಅವರು ಜಗದ್ದಲ್ ವಿಧಾನಸಭಾ ಕ್ಷೇತ್ರದ ಆತ್ಪುರ್ ಇಎಸ್‌ಡಿ ಗೇಟ್‌ನಲ್ಲಿ ರೋಡ್‌ಶೋ ನಡೆಸಲಿದ್ದಾರೆ. ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಭವಾಬಾನಿಪುರದಲ್ಲಿ ಪ್ರಚಾರ ನಡೆಸಲಿದ್ದಾರೆ, ತೃಣಮೂಲ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಇಂದು ಹೌರಾ ಮತ್ತು ದಕ್ಷಿಣ ೨೪ ಪರಗಣಗಳ ಹಲವಾರು ಸ್ಥಳಗಳಲ್ಲಿ ಚುನಾವಣಾ ಸಭೆಗಳು ಮತ್ತು ರೋಡ್‌ಶೋಗಳನ್ನು ನಡೆಸಲಿದ್ದಾರೆ.

<><><>

ಪಶ್ಚಿಮ ಬಂಗಾಳದಲ್ಲಿ, ಹಿರಿಯ ಬಿಜೆಪಿ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ತಮ್ಮ ಪಕ್ಷವು ಮೊದಲ ಹಂತದ ವಿಧಾನಸಭಾ ಚುನಾವಣೆಯ ನಂತರ ಪ್ರಬಲ ಪ್ರದರ್ಶನದತ್ತ ಮುಂದೆ ಸಾಗುತ್ತಿವೆ ಎಂದು ಹೇಳಿದ್ದಾರೆ. ಕೋಲ್ಕತ್ತಾದ ನ್ಯೂ ಟೌನ್‌ನಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮೊದಲ ಹಂತದಲ್ಲಿ ಚುನಾವಣೆ ನಡೆದ ೧೫೨ ಸ್ಥಾನಗಳಲ್ಲಿ ೧೧೦ ಕ್ಕೂ ಹೆಚ್ಚು ಸ್ಥಾನಗಳನ್ನು ಬಿಜೆಪಿ ಗೆಲ್ಲುವ ಸಾಧ್ಯತೆಯಿದೆ ಎಂದು ಹೇಳಿದರು. ಮುಕ್ತ ಮತ್ತು ನ್ಯಾಯಯುತ ಚುನಾವಣೆಯನ್ನು ಖಚಿತಪಡಿಸಿದ್ದಕ್ಕಾಗಿ ಅವರು ಚುನಾವಣಾ ಆಯೋಗ, ಭದ್ರತಾ ಪಡೆಗಳಿಗೆ ಧನ್ಯವಾದ ಅರ್ಪಿಸಿದರು. ಟಿಎಂಸಿ ನಿರ್ಗಮನ ಸನ್ನಿಹಿತವಾಗಿದೆ , ಬಿಜೆಪಿ ಸಂಪೂರ್ಣ ಬಹುಮತದೊಂದಿಗೆ ಸರ್ಕಾರ ರಚಿಸಲಿದೆ ಎಂದರು. ಮೊದಲ ಹಂತದಲ್ಲಿ ಶೇಕಡಾ ೯೨ ಕ್ಕಿಂತ ಹೆಚ್ಚು ಮತದಾನ ದಾಖಲಾಗಿದ್ದಕ್ಕಾಗಿ ಮತದಾರರನ್ನು ಅಭಿನಂದಿಸಿದರು, ಇದು ಪ್ರಜಾಪ್ರಭುತ್ವಕ್ಕೆ ಸಕಾರಾತ್ಮಕ ಸಂಕೇತ ಎಂದು ಬಣ್ಣಿಸಿದರು. ಶಾಂತಿಯುತ ಮತದಾನಕ್ಕಾಗಿ ಕೇಂದ್ರ ಪಡೆಗಳು, ಚುನಾವಣಾ ಆಯೋಗ ಮತ್ತು ರಾಜ್ಯ ಪೊಲೀಸರ ಪಾತ್ರವನ್ನು ಬಿಜೆಪಿ ನಾಯಕರು ಶ್ಲಾಘಿಸಿದರು. ಈ ಬಾರಿ ಜನರು ಭಯಮುಕ್ತ ವಾತಾವರಣದಲ್ಲಿ ಮತ ಚಲಾಯಿಸಿದ್ದಾರೆ ಎಂದು ಹೇಳಿದರು.

<><><>

೨೦೨೫-೨೬ರಲ್ಲಿ ೭೫ ಲಕ್ಷಕ್ಕೂ ಹೆಚ್ಚು ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಅವರ ಶಿಕ್ಷಣ ಮತ್ತು ಸಬಲೀಕರಣಕ್ಕಾಗಿ ಕೇಂದ್ರ ಸರ್ಕಾರ ಏಳು ಸಾವಿರದ ೯೮೧ ಕೋಟಿ ರೂಪಾಯಿಗಳನ್ನು ವಿತರಿಸಿದೆ. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ಅವರು, ಉದ್ದೇಶಿತ ಮಧ್ಯಸ್ಥಿಕೆಗಳು ಮತ್ತು ಕಲ್ಯಾಣ ಉಪಕ್ರಮಗಳ ಮೂಲಕ ಸಮಾಜದ ಎಲ್ಲಾ ವರ್ಗಗಳಿಗೆ ಸಮಗ್ರ ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯವನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯು ಪರಿಶಿಷ್ಟ ಜಾತಿಗಳಿಗೆ ಸೇರಿದ ಅಂಚಿನಲ್ಲಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಸಬಲೀಕರಣದ ಮೇಲೆ ಕೇಂದ್ರೀಕರಿಸಿದ ಹಲವಾರು ಯೋಜನೆಗಳನ್ನು ಜಾರಿಗೊಳಿಸುತ್ತಿದೆ ಎಂದು ಅವರು ತಿಳಿಸಿದ್ದಾರೆ. ಇತರೆ ಹಿಂದುಳಿದ ವರ್ಗಗಳು, ಹಿರಿಯ ನಾಗರಿಕರು, ತೃತೀಯ ಲಿಂಗಿಗಳು, ನೈರ್ಮಲ್ಯ ಕಾರ್ಮಿಕರು ಮತ್ತು ಆರ್ಥಿಕವಾಗಿ ದುರ್ಬಲ ವರ್ಗಗಳು ಸೇರಿದಂತೆ ಸಮಾಜದ ವಿವಿಧ ವರ್ಗಗಳ

ಉನ್ನತಿಗಾಗಿ ಗುರಿಯನ್ನು ಹೊಂದಿರುವ ವಿವಿಧ ಕಾಯಿದೆಗಳು ಮತ್ತು ಕಲ್ಯಾಣ ಯೋಜನೆಗಳ ಅನುಷ್ಠಾನವನ್ನು ಇಲಾಖೆ ನೋಡಿಕೊಳ್ಳುತ್ತದೆ ಎಂದು ಸಚಿವರು ಹೇಳಿದರು.

<><><>

ರಾಷ್ಟ್ರೀಯ ಯಾಂತ್ರೀಕೃತ ನೈರ್ಮಲ್ಯ ಪರಿಸರ ವ್ಯವಸ್ಥೆ ಯೋಜನೆಯು ದೇಶಾದ್ಯಂತ ನೈರ್ಮಲ್ಯ ಕಾರ್ಮಿಕರ ಘನತೆ, ಸುರಕ್ಷತೆ ಮತ್ತು ಸುಸ್ಥಿರ ಜೀವನೋಪಾಯವನ್ನು ಮುನ್ನಡೆಸುವಲ್ಲಿ ಮಹತ್ವದ ಮೈಲಿಗಲ್ಲನ್ನು ಇರಿಸಿದೆ. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ಈ ಯೋಜನೆಯಡಿಯಲ್ಲಿ ಒಟ್ಟು ೯೦ ಸಾವಿರಕ್ಕೂ ಹೆಚ್ಚು ಒಳಚರಂಡಿ ಮತ್ತು ಸೆಪ್ಟಿಕ್ ಟ್ಯಾಂಕ್ ಕಾರ್ಮಿಕರನ್ನು ಗುರುತಿಸಲಾಗಿದೆ, ಅವರಲ್ಲಿ ೮೯ ಸಾವಿರ ೧೪೮ ಜನರನ್ನು ಮೌಲ್ಯೀಕರಿಸಲಾಗಿದೆ ಎಂದು ತಿಳಿಸಿದೆ. ಯೋಜನೆಯಡಿಯಲ್ಲಿ ೮೭ ಸಾವಿರದ ಮೂವತ್ತೇಳು ಕಾರ್ಮಿಕರಿಗೆ ಪಿಪಿಇ ಕಿಟ್‌ಗಳನ್ನು ಒದಗಿಸಲಾಗಿದೆ ಮತ್ತು ೭೬ ಸಾವಿರಕ್ಕೂ ಹೆಚ್ಚು ಕಾರ್ಮಿಕರನ್ನು ವಿವಿಧ ಆರೋಗ್ಯ ವಿಮಾ ಯೋಜನೆಗಳ ಅಡಿಯಲ್ಲಿ ಒಳಪಡಿಸಲಾಗಿದೆ ಎಂದು ಹೇಳಿದೆ. ಸುರಕ್ಷತಾ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸಲು, ಪುರಸಭೆ ನಿಗಮಗಳು ಮತ್ತು ಜಿಲ್ಲೆಗಳಲ್ಲಿ ಸ್ಥಾಪಿಸಲಾದ ತುರ್ತು ಪ್ರತಿಕ್ರಿಯೆ ನೈರ್ಮಲ್ಯ ಘಟಕಗಳಿಗೆ ಏಳುನೂರ ೫೩ ಸುರಕ್ಷತಾ ಸಾಧನಗಳನ್ನು ರವಾನಿಸಲಾಗಿದೆ ಎಂದು ಸಚಿವಾಲಯವು ತಿಳಿಸಿದೆ.

<><><>

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ಇಂದಿನಿಂದ ಇದೇ ೧೯ರ ವರೆಗೆ ಚಂಡೀಗಢದಲ್ಲಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳೊಂದಿಗೆ "ಅಂತ್ಯೋದಯ್ ಕಾ ಸಂಕಲ್ಪ, ಅಮೃತ್ ಕಾ ಪ್ರತಿಬಿಂಬ್ - ವಿಕಸಿತ ಭಾರತ @೨೦೪೭" ಎಂಬ ವಿಷಯದ ಮೇಲೆ ಮೂರು ದಿನಗಳ ಚಿಂತನ್ ಶಿಬಿರವನ್ನು ಆಯೋಜಿಸಿದೆ. ಅಮೃತ್ ಕಾಲ್ ಮತ್ತು ವಿಕಸಿತ ಭಾರತದ ದೃಷ್ಟಿಕೋನಕ್ಕೆ ಅನುಗುಣವಾಗಿ ಸಮಗ್ರ ಸಬಲೀಕರಣಕ್ಕೆ ಸಚಿವಾಲಯದ ಬದ್ಧತೆಯನ್ನು ಈ ವಿಷಯವು ಸಾಕಾರಗೊಳಿಸುತ್ತದೆ. ಉದ್ಘಾಟನಾ ಅಧಿವೇಶನದ ಅಧ್ಯಕ್ಷತೆಯನ್ನು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ವಹಿಸಲಿದ್ದಾರೆ, ಕೇಂದ್ರದ ರಾಜ್ಯ ಸಚಿವರುಗಳಾದ ಬಿ.ಎಲ್. ವರ್ಮಾ ಮತ್ತು ರಾಮದಾಸ್ ಅಠಾವಳೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಸಾಮಾಜಿಕ ನ್ಯಾಯ ಉಪಕ್ರಮಗಳ ವಿತರಣೆಯನ್ನು ಬಲಪಡಿಸುವುದು, ಪ್ರಮುಖ ಯೋಜನೆಗಳ ಕೊನೆಯ ಹಂತದ ಅನುಷ್ಠಾನವನ್ನು ಸುಧಾರಿಸುವುದು

ಮತ್ತು ಅಂಚಿನಲ್ಲಿರುವ ಸಮುದಾಯಗಳ ಸಮಗ್ರ ಮತ್ತು ಸುಸ್ಥಿರ ಸಬಲೀಕರಣಕ್ಕಾಗಿ ಕಾರ್ಯಸಾಧ್ಯವಾದ ಮಾರ್ಗಸೂಚಿಯನ್ನು ಅಭಿವೃದ್ಧಿಪಡಿಸುವುದು ಈ ಶಿಬಿರದ ಉದ್ದೇಶವಾಗಿದೆ.

<><><><>

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪಂಚಾಯತ್ ರಾಜ್ ತಳಮಟ್ಟದ ಪ್ರಜಾಪ್ರಭುತ್ವ ಮತ್ತು ಭಾಗವಹಿಸುವಿಕೆಯ ಆಡಳಿತದ ಚೈತನ್ಯವನ್ನು ಸಾಕಾರಗೊಳಿಸುತ್ತದೆ, ಸ್ಥಳೀಯ ಸಮುದಾಯಗಳಿಗೆ ಅಧಿಕಾರ ನೀಡುತ್ತದೆ ಹಾಗೂ ಸಮಗ್ರ ಅಭಿವೃದ್ಧಿಯನ್ನು ಬಲಪಡಿಸುತ್ತದೆ, ಗ್ರಾಮ ಮಟ್ಟದಲ್ಲಿ ನಿರ್ಧಾರ ತೆಗೆದುಕೊಳ್ಳುವಲ್ಲಿ ಜನರ ಧ್ವನಿಯನ್ನು ಕೇಳುವಂತೆ ಮಾಡುತ್ತದೆ ಎಂದು ಅವರು ತಿಳಿಸಿದ್ದಾರೆ. ರಾಷ್ಟ್ರೀಯ ಪಂಚಾಯತ್ ರಾಜ್ ದಿನದ ಸಂದರ್ಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ದೇಶದ ನಾಗರಿಕರಿಗೆ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅವರು, ಪಂಚಾಯತ್ ವ್ಯವಸ್ಥೆಯು ಭಾರತದ ಅತ್ಯಂತ ಹಳೆಯ ಪ್ರಜಾಪ್ರಭುತ್ವ ಸಂಪ್ರದಾಯಗಳಲ್ಲಿ ಒಂದಾಗಿದೆ ಮತ್ತು ಪ್ರಜಾಪ್ರಭುತ್ವದ ಬಲವಾದ ಆಧಾರಸ್ತಂಭವಾಗಿದೆ ಎಂದು ಹೇಳಿದ್ದಾರೆ.

<><><><>

ಸಾರ್ಕ್ ಕರೆನ್ಸಿ ಸ್ವಾಪ್ ಫ್ರೇಮ್‌ವರ್ಕ್ ಅಡಿಯಲ್ಲಿ ಮಾಲ್ಡೀವ್ಸ್‌ಗೆ ೩೦ ಶತಕೋಟಿ ರೂಪಾಯಿಗಳ ಮೊದಲ ಹಿಂಪಡೆಯುವಿಕೆಯನ್ನು ಭಾರತ ಅನುಮೋದಿಸಿದೆ, ಇದು ದ್ವೀಪ ರಾಷ್ಟ್ರಕ್ಕೆ ತನ್ನ ನಿರಂತರ ಆರ್ಥಿಕ ಬೆಂಬಲವನ್ನು ಬಲಪಡಿಸುತ್ತದೆ. ೨೦೨೪ರ ಅಕ್ಟೋಬರ್‌ನಲ್ಲಿ ಅಧ್ಯಕ್ಷ ಮೊಹಮ್ಮದ್ ಮುಯಿಝ್ ಅವರ ನವದೆಹಲಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಭಾರತದ ರಿಸರ್ವ್ ಬ್ಯಾಂಕ್ ಮತ್ತು ಮಾಲ್ಡೀವ್ಸ್ ಸರ್ಕಾರದ ನಡುವೆ ಒಪ್ಪಿಕೊಂಡ ಚೌಕಟ್ಟಿನ ಅಡಿಯಲ್ಲಿ ಮೊದಲ ಡ್ರಾಡೌನ್‌ನ ಭಾಗವಾಗಿ ಹಣವನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದು ಮಾಲೆಯಲ್ಲಿರುವ ಭಾರತೀಯ ಹೈಕಮಿಷನ್ ತಿಳಿಸಿದೆ.

<><><><>

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧ್ಯಕ್ಷೆ ಅನ್ನಾಲೆನಾ ಬೇರ್‌ಬಾಕ್ ಮುಂದಿನ ವಾರ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅವರು, ಅಧಿಕಾರಿಗಳೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಅವರ ವಕ್ತಾರ ಲಾ ನೀಸ್ ಕಾಲಿನ್ಸ್ ಅವರು ಯುಎನ್‌ಜಿಎಯ ೮೦ನೇ ಅಧಿವೇಶನದ ಅಧ್ಯಕ್ಷೆ ಬೇರ್‌ಬಾಕ್ ಮುಂದಿನ ವಾರ ನವದೆಹಲಿ ಮತ್ತು ಬೀಜಿಂಗ್‌ಗೆ ಅಧಿಕೃತ

ಪ್ರಯಾಣ ಕೈಗೊಳ್ಳಲಿದ್ದಾರೆ ಎಂದು ಹೇಳಿದ್ದಾರೆ. ಭಾರತ ಮತ್ತು ಚೀನಾ ಸರ್ಕಾರಗಳ ಆಹ್ವಾನದ ಮೇರೆಗೆ ಬೇರ್‌ಬಾಕ್ ಈ ಭೇಟಿ ನೀಡಲಿದ್ದಾರೆ.

<><><><>

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟಾನ್ಸ್ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><><><>

ಈಜಿಪ್ಟ್‌ನ ಕೈರೋದಲ್ಲಿ ನಡೆಯುತ್ತಿರುವ ಅಂತರರಾಷ್ಟ್ರೀಯ ಶೂಟಿಂಗ್ ಸ್ಪೋರ್ಟ್ ಫೆಡರೇಶನ್ ಜೂನಿಯರ್ ವಿಶ್ವಕಪ್‌ನಲ್ಲಿ ಭಾರತ ಎರಡು ಚಿನ್ನ ಸೇರಿದಂತೆ ಒಂಬತ್ತು ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>